**ಕರ್ನಾಟಕ ಸರ್ಕಾರ**

ಸಂಖ್ಯೆ: ಜಸಂಇ 33 ಸೇಇಸಿ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 07.04.2022.

**ಅಧಿಸೂಚನೆ**

**ವಿಷಯ:** ಜಲಸಂಪನ್ಮೂಲ ಇಲಾಖೆಯ ಕಲ್ಯಾಣ ಕರ್ನಾಟಕ 371ಜೆ ರ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗಳನ್ನು ರಾಜ್ಯ ಮಟ್ಟದ ಸ್ಥಳೀಯ ವೃಂದದಿಂದ ಪ್ರಾದೇಶಿಕ ಸ್ಥಳೀಯ ವೃಂದದ ಹುದ್ದೆಗಳನ್ನಾಗಿ ಬದಲಾಯಿಸುವ ಬಗ್ಗೆ.

***

ಅಧಿಸೂಚನೆ ಸಂಖ್ಯೆ: ಜಸಂಇ 167 ಸೇಅವಿ 2013, ದಿನಾಂಕ: 30.06.2016 ರಲ್ಲಿ ಭಾರತ ಸಂವಿಧಾನ ಅನುಚ್ಛೇದ -371ಜೆ ಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದ್ರಾಬಾದ್- ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ 2013ರ ಕಂಡಿಕೆ-28ರನ್ವಯ ಜಲ ಸಂಪನ್ಮೂಲ ಇಲಾಖೆಯಲ್ಲಿ ಪ್ರಾದೇಶಿಕ ಸ್ಥಳೀಯ ವೃಂದ ಮತ್ತು ರಾಜ್ಯ ಮಟ್ಟದ ಸ್ಥಳೀಯ ವೃಂದಗಳನ್ನು ಪ್ರತ್ಯೇಕವಾಗಿ ರಚಿಸಲಾಗಿದೆ.

ಸದರಿ ಅಧಿಸೂಚನೆಯ ಅನುಸೂಚಿ-1ರ ಕ್ರಮಸಂಖ್ಯೆ: 8ರಲ್ಲಿರುವ "ಸಹಾಯಕ ಕಾರ್ಯಪಾಲಕ ಇಂಜಿನಿಯರ್" ಹುದ್ದೆಗೆ ಹೈದ್ರಾಬಾದ್ ಕರ್ನಾಟಕ ಪ್ರದೇಶದವರಿಗಾಗಿ ಮೀಸಲಿಟ್ಟ ರಾಜ್ಯಮಟ್ಟದ ಶೇ 8ರಷ್ಟು ಹುದ್ದೆಗಳಲ್ಲಿ ಮುಂಬಡ್ತಿಗೆ 03 ಹುದ್ದೆಗಳನ್ನು ಹಾಗೂ ಅನುಸೂಚಿ-2ರ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಸ್ಥಳೀಯ ವೃಂದದ ಶೇ 75 ಹುದ್ದೆಗಳಲ್ಲಿ ಮುಂಬಡ್ತಿಗೆ 84 ಹುದ್ದೆಗಳನ್ನು ಮೀಸಲಿರಿಸಲಾಗಿದೆ.

ರಾಜ್ಯ ಮಟ್ಟದ ಕೋಟಾದಡಿ 03 ಹುದ್ದೆಗಳಿಗೆ ಎದುರಾಗಿ ಅಭಿಮತ ಸಲ್ಲಿಸಿರುವ ಒಬ್ಬ ಅಭ್ಯರ್ಥಿಗಾಗಿ ಒಂದು ಹುದ್ದೆಯನ್ನು ಮೀಸಲಿರಿಸಿ ಬಳಕೆಯಾಗದೇ ಬಾಕಿ ಉಳಿದ 2 ಸಹಾಯಕ ಕಾರ್ಯಪಾಲಕ ಇಂಜಿನಿಯರ್ (ವಿಭಾಗ-1) ಹುದ್ದೆಗಳನ್ನು ಸ್ಥಳೀಯ ಪ್ರಾದೇಶಿಕ ಮಟ್ಟದ ಹುದ್ದೆಗಳಾಗಿ ಪರಿವರ್ತಿಸಿ, ಅನುಸೂಚಿ-2ರ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ವೃಂದದ ಮುಂಬಡ್ತಿ ಕೋಟಾದಡಿ ಗುರುತಿಸಿರುವ 84 ಹುದ್ದೆಗಳಿಗೆ ಸೇರಿಸಿ 86 ಹುದ್ದೆಗಳೆಂದು ಅಧಿಸೂಚಿಸಲಾಗಿದೆ.

ಈ ಅಧಿಸೂಚನೆಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಹೈದ್ರಾಬಾದ್-ಕರ್ನಾಟಕ ವಿಶೇಷ ಕೋಶ)ಯ ಟಿಪ್ಪಣಿ ಸಂಖ್ಯೆ: ಸಿಆಸುಇ 11 ಹೈಕಉ 2022 ದಿನಾಂಕ: 23.03.2022ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

M.A. Mahalakshmi
(ಎಂ.ಎ.ಮಹಾಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ (ಸೇವೆಗಳು-ಬಿ)

07/04/22

**ಇವರಿಗೆ**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ

**ಪ್ರತಿ**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ.) / (ಇ & ಆರ್.ಎಸ್.ಎ) ಕರ್ನಾಟಕ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಸಾಂಖ್ಯಿಕ ಮತ್ತು ಕಾರ್ಯಕ್ರಮ ಸಂಯೋಜನೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ (ಹೈದ್ರಾಬಾದ್-ಕರ್ನಾಟಕ ವಿಶೇಷ ಕೋಶ) ಇಲಾಖೆ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ (ಸೇವೆಗಳು-ಎ).
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9. ಸರ್ಕಾರದ ಜಂಟಿ ಕಾರ್ಯದರ್ಶಿ(ಸೇವೆಗಳು) ಜಲಸಂಪನ್ಮೂಲ ಇಲಾಖೆ ಇವರ ಆಪ್ತ ಸಹಾಯಕರು.
10. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.